**All India Radio: Bangalore**
**National Bulletin In Kannada**
**25.02.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**25.02.2026 1.10 p.m.**
**<><><><>**

ಮುಖ್ಯಾಂಶಗಳು

1. ಇಸ್ರೇಲ್ ಪ್ರವಾಸದಿಂದ ಉಭಯ ದೇಶಗಳ ನಡುವಿನ ಬಾಂಧವ್ಯ ಮತ್ತಷ್ಟು ಬಲವರ್ಧನೆ- ಪ್ರಧಾನಿ ನರೇಂದ್ರ ಮೋದಿ
2. 'ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ'ಯಡಿ ಡಿಜಿಟಲ್ ರೂಪದಲ್ಲಿ ಆಹಾರ ಸಬ್ಸಿಡಿ ವಿತರಿಸುವ ಪ್ರಾಯೋಗಿಕ ಯೋಜನೆಗೆ ನಾಳೆ ಚಾಲನೆ
3. ಕೇಂದ್ರ ಚುನಾವಣಾ ಆಯೋಗದ ತಂಡ ಇಂದು ಪುದುಚೇರಿಗೆ ಭೇಟಿ; ಚುನಾವಣಾ ಸಿದ್ಧತೆಗಳ ಕುರಿತು ಪರಿಶೀಲನೆ
4. ಶಸ್ತ್ರಾಸ್ತ್ರ ಸ್ಪರ್ಧೆ ತಡೆಗೆ ಪರಮಾಣು ನಿಶ್ಯಸ್ತ್ರೀಕರಣ ಸಾಧಿಸುವುದು ಅಗತ್ಯ- ವಿದೇಶಾಂಗ ಕಾರ್ಯದರ್ಶಿ ಹೇಳಿಕೆ
5. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಸೂಪರ್ ೮ ರ ಪಂದ್ಯದಲ್ಲಿ ಇಂದು ಸಂಜೆ ಶ್ರೀಲಂಕಾ - ನ್ಯೂಜಿಲೆಂಡ್ ಹಣಾಹಣಿ

<><><><>

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಆಹ್ವಾನದ ಮೇರೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಎರಡು ದಿನಗಳ ಭೇಟಿಗಾಗಿ ಇಂದು ಇಸ್ರೇಲ್ ಪ್ರವಾಸ ಕೈಗೊಂಡಿದ್ದಾರೆ. ಇದು ಇಸ್ರೇಲ್‌ಗೆ ಪ್ರಧಾನಮಂತ್ರಿ ಅವರ ಎರಡನೇ ಭೇಟಿಯಾಗಿದೆ. ಪ್ರಧಾನಿ ಅವರು ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹು ಅವರನ್ನು ಭೇಟಿ ಮಾಡಲಿದ್ದು, ಭಾರತ - ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಆಗಿರುವ ಮಹತ್ವದ ಪ್ರಗತಿಯನ್ನು ಪರಾಮರ್ಶಿಸಲಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನ, ನಾವೀನ್ಯತೆ, ರಕ್ಷಣೆ ಮತ್ತು ಭದ್ರತೆ, ಕೃಷಿ, ನೀರು ನಿರ್ವಹಣೆ, ವ್ಯಾಪಾರ ಮತ್ತು ಆರ್ಥಿಕತೆ ಮತ್ತು ಜನರ ನಡುವಿನ ವಿನಿಮಯ ಸೇರಿ ಸಹಕಾರದ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಉಭಯ ನಾಯಕರು ಪರಸ್ಪರ

ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ. ಅಲ್ಲದೆ, ಪ್ರಧಾನಿ ಇಸ್ರೇಲ್ ಅಧ್ಯಕ್ಷರಾದ ಐಸಾಕ್ ಹೆರ್ಜಾಗ್ ಅವರನ್ನೂ ಭೇಟಿ ಮಾಡಲಿದ್ದಾರೆ. ಪ್ರಧಾನಮಂತ್ರಿ ಅವರ ಈ ಭೇಟಿಯು, ಎರಡೂ ದೇಶಗಳ ನಡುವಿನ ಆಳವಾದ ಮತ್ತು ದೀರ್ಘಕಾಲೀನ ಕಾರ್ಯತಂತ್ರದ ಪಾಲುದಾರಿಕೆ ಪುನರುಚ್ಚರಿಸುತ್ತದೆ ಮತ್ತು ಸಾಮಾನ್ಯ ಸವಾಲುಗಳನ್ನು ಪರಿಶೀಲಿಸಲು ಅವಕಾಶ ಒದಗಿಸುತ್ತದೆ.

<><><>

ತಮ್ಮ ಎರಡು ದಿನಗಳ ಇಸ್ರೇಲ್ ಪ್ರವಾಸ ಉಭಯ ದೇಶಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಗೊಳಿಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಇಸ್ರೇಲ್ ಪ್ರವಾಸಕ್ಕೂ ಮುನ್ನ ನೀಡಿರುವ ನಿರ್ಗಮನ ಹೇಳಿಕೆಯಲ್ಲಿ ಅವರು, ಕಾರ್ಯತಂತ್ರ ಪಾಲುದಾರಿಕೆಗೆ ಹೊಸ ಗುರಿಗಳನ್ನು ನಿಗದಿಪಡಿಸಲಾಗುವುದು ಮತ್ತು ಉಭಯ ದೇಶಗಳು ಸ್ಥಿತಿಸ್ಥಾಪಕತ್ವ, ನಾವೀನ್ಯತೆ ಮತ್ತು ಸಮೃದ್ಧ ಭವಿಷ್ಯದ ಕುರಿತು ಮುನ್ನೋಟವನ್ನು ಹಂಚಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ಭಾರತ ಮತ್ತು ಇಸ್ರೇಲ್, ಉತ್ಕೃತೆಯ ಬಹು ಆಯಾಮದ ಕಾರ್ಯತಾಂತ್ರಿಕ ಪಾಲುದಾರಿಕೆ ಹೊಸ ಪ್ರಗತಿಯನ್ನು ದಾಖಲಿಸಿದೆ. ತಾವು ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರೊಂದಿಗೆ ಮಾತುಕತೆಯನ್ನು ಎದುರು ನೋಡುತ್ತಿದ್ದೇವೆ. ವಿಜ್ಞಾನ, ತಂತ್ರಜ್ಞಾನ, ನಾವೀನ್ಯತೆ ಕೃಷಿ ಸೇರಿದಂತೆ ಹಲವು ವಲಯಗಳಲ್ಲಿ ಉಭಯ ದೇಶಗಳ ನಡುವಿನ ಸಹಕಾರ ಸಂಬಂಧ ಬಲವರ್ಧನೆಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಪ್ರಧಾನಿ ಹೇಳಿದ್ದಾರೆ. ಅಲ್ಲದೆ, ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಚಾರಗಳ ಬಗ್ಗೆ ವಿಚಾರ ವಿನಿಮಯ ನಡೆಸಲಾಗುವುದು. ಜೊತೆಗೆ ಅಧ್ಯಕ್ಷ ಐಸಾಕ್ ಹೆರ್ಜಾಗ್ ಅವರನ್ನು ಭೇಟಿ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಇಸ್ರೇಲ್ ಸಂಸತ್ತನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಭಾರತದ ಪ್ರಧಾನಿಯೊಬ್ಬರು ಇಸ್ರೇಲ್ ಸಂಸತ್ ಉದ್ದೇಶಿಸಿ ಭಾಷಣ ಮಾಡುತ್ತಿರುವುದು ಇದೇ ಮೊದಲು.

<><><>

ಭಾರತ ಮತ್ತು ಇಸ್ರೇಲ್ ಆತ್ಮೀಯ ಮತ್ತು ಭವಿಷ್ಯದ ಕಾರ್ಯತಾಂತ್ರಿಕ ಪಾಲುದಾರಿಕೆಯನ್ನು ಹಂಚಿಕೊಂಡಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಪ್ರಧಾನಿಯವರ ಇಸ್ರೇಲ್ ಭೇಟಿಯ ಕುರಿತು ತಮ್ಮ ಸಾಮಾಜಿಕ

ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಪ್ರಧಾನಿ ಅವರ ಭೇಟಿ ಸಾಕಷ್ಟು ಕಾರ್ಯಸೂಚಿಯನ್ನು ಒಳಗೊಂಡಿದೆ. ಇದರಿಂದ ಉಭಯ ದೇಶಗಳ ನಡುವಿನ ಸಂಬಂಧ ಮತ್ತಷ್ಟು ಬಲವರ್ಧನೆಯಾಗಲಿದೆ ಎಂದು ತಿಳಿಸಿದ್ದಾರೆ.

<><><>

'ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ'ಯಡಿ, ಕೇಂದ್ರೀಯ ಬ್ಯಾಂಕ್ ಡಿಜಿಟಲ್ ಕರೆನ್ಸಿ ಆಧಾರಿತ ಆಹಾರ ಸಬ್ಸಿಡಿ ವಿತರಣಾ ಪ್ರಾಯೋಗಿಕ ಯೋಜನೆಗೆ ಕೇಂದ್ರ ಸರ್ಕಾರ ನಾಳೆ ಪುದುಚೇರಿಯಲ್ಲಿ ಚಾಲನೆ ನೀಡಲಿದೆ. ಕೇಂದ್ರ ಆಹಾರ ಮತ್ತು ಸಾರ್ವಜನಿಕ ಪಡಿತರ ಸಚಿವ ಪ್ರಲ್ಹಾದ್ ಜೋಶಿ ಅವರು, ಪ್ರಾಯೋಗಿಕ ಯೋಜನೆಗೆ ಚಾಲನೆ ನೀಡಲಿದ್ದು, ಕಾರ್ಯಕ್ರಮದಲ್ಲಿ ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಶನಾಥನ್, ಮುಖ್ಯಮಂತ್ರಿ ರಂಗಸ್ವಾಮಿ ಮತ್ತಿತರರು ಭಾಗವಹಿಸಲಿದ್ದಾರೆ. ಈ ಉಪಕ್ರಮದಡಿ, ಆಹಾರ ಸಬ್ಸಿಡಿಯನ್ನು ಮೊದಲೇ ಗುರುತಿಸಲಾಗಿರುವ ಫಲಾನುಭವಿಗಳ ಡಿಜಿಟಲ್ ವಾಲೆಟ್‌ಗಳಿಗೆ ಡಿಜಿಟಲ್ ಕರೆನ್ಸಿ ರೂಪದಲ್ಲಿ ಆರ್‌ಬಿಐ ವಿತರಿಸಲಿದೆ. ಇದು, ಆಹಾರ ಸಬ್ಸಿಡಿ ವಿತರಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ದಕ್ಷತೆ ತರುವ ಗುರಿ ಹೊಂದಿದೆ.

<><><>

ಹಣಕಾಸು ವರ್ಷವು ಅಂತ್ಯಗೊಳ್ಳುತ್ತಿರುವುದರಿಂದ ಕೇಂದ್ರ ಸರ್ಕಾರವು ರಾಜ್ಯಗಳಿಗೆ ಬಿಡುಗಡೆ ಮಾಡುವ ಹಣವನ್ನು ಮಾರ್ಚ್ ೩೧ರೊಳಗೆ ರೈತರ ಅನುಕೂಲಕ್ಕಾಗಿ ಸಮಯಕ್ಕೆ ಸರಿಯಾಗಿ, ಸೂಕ್ತವಾಗಿ ಮತ್ತು ಸಾಧ್ಯವಾದಷ್ಟು ಉತ್ತಮ ರೀತಿಯಲ್ಲಿ ಬಳಸಿಕೊಳ್ಳುವುದು ಅತ್ಯಗತ್ಯ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ವಿವಿಧ ರಾಜ್ಯಗಳ ಕೃಷಿ ಸಚಿವರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ವರ್ಚುವಲ್ ಸಭೆ ನಡೆಸಿದ ಅವರು, ವಿಳಂಬ ಅಥವಾ ಭಾಗಶಃ ಬಳಕೆ ರೈತ ಆಧಾರಿತ ಯೋಜನೆಗಳ ಉದ್ದೇಶವನ್ನೇ ವಿಫಲಗೊಳಿಸುತ್ತದೆ ಮತ್ತು ತಳಮಟ್ಟದಲ್ಲಿ ಅವುಗಳ ಪರಿಣಾಮವನ್ನು ದುರ್ಬಲಗೊಳಿಸುತ್ತದೆ ಎಂದು ಕೇಂದ್ರ ಸಚಿವರು ಹೇಳಿದರು.

ಧ್ವನಿ: ಶಿವರಾಜ್ ಸಿಂಗ್ ( ೨೧ ಸೆಕೆಂಡ್ಸ್ )

<><><>

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ನೇತೃತ್ವದ ಕೇಂದ್ರ ಚುನಾವಣಾ ಆಯೋಗ, ಚುನಾವಣಾ ಸಿದ್ಧತೆಗಳ ಪರಾಮರ್ಶೆಗೆ ಇಂದು ಪುದುಚೆರಿಗೆ ಭೇಟಿ ನೀಡಲಿದೆ. ಆಯೋಗದ ತಂಡ ಮುಖ್ಯ ಚುನಾವಣಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆಗಳನ್ನು ನಡೆಸಲಿದೆ. ಅಲ್ಲದೆ, ಚುನಾವಣಾ ಕಾರ್ಯದಲ್ಲಿ ತೊಡಗಿರುವ ವಿವಿಧ ಸಂಸ್ಥೆಗಳ ಮುಖ್ಯಸ್ಥರು ಹಾಗೂ ನೋಡಲ್ ಅಧಿಕಾರಿಗಳೊಂದಿಗೆ ಆಯೋಗ ಸಭೆ ನಡೆಸಲಿದೆ. ಆಯೋಗದ ತಂಡ, ನಾಳೆ ತಮಿಳುನಾಡಿಗೆ ಭೇಟಿ ನೀಡಿ, ಅಲ್ಲಿನ ಚುನಾವಣಾ ಸಿದ್ಧತೆಗಳ ಬಗ್ಗೆ ಪರಿಶೀಲನೆ ನಡೆಸಲಿದೆ.

<><><>

ಪಶ್ಚಿಮ ಬಂಗಾಳದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ನಿಯೋಜಿಸುವ ಕೇಂದ್ರೀಯ ಸಶಸ್ತ್ರ ಪೊಲೀಸ್ ಪಡೆಗಳ ಸಿಬ್ಬಂದಿಯನ್ನು ಹೊತ್ತೊಯ್ಯುವ ವಾಹನಗಳಿಗೆ ಜಿಪಿಎಸ್ ಟ್ರ್ಯಾಕರ್‌ಗಳನ್ನು ಅಳವಡಿಸಲು ಭಾರತೀಯ ಚುನಾವಣಾ ಆಯೋಗ ನಿರ್ಧರಿಸಿದೆ. ೨ ಹಂತಗಳಲ್ಲಿ ಪಶ್ಚಿಮ ಬಂಗಾಳಕ್ಕೆ ಸಿಎಬಿಎಫ್ ಸಿಬ್ಬಂದಿಯನ್ನು ನಿಯೋಜಿಸಲಾಗುವುದು. ಮೊದಲ ಹಂತದಲ್ಲಿ ೨೪೦ ತುಕಡಿಗಳನ್ನು ಮಾರ್ಚ್ ೧ ರಂದು ಮತ್ತು ಎರಡನೇ ಹಂತದಲ್ಲಿ ಮತ್ತೆ ೨೪೦ ತುಕಡಿಗಳನ್ನು ಮಾರ್ಚ್ ೧೦ ರಂದು ನಿಯೋಜಿಸಲಾಗುವುದು.

<><><>

ಕಾರ್ಯತಂತ್ರದ ಸ್ಥಿರತೆಯನ್ನು ಕಾಪಾಡಿಕೊಳ್ಳುವ, ಶಸ್ತ್ರಾಸ್ತ್ರ ಸ್ಪರ್ಧೆಯನ್ನು ತಡೆಗಟ್ಟುವ ಮತ್ತು ಸಾರ್ವತ್ರಿಕ ತಾರತಮ್ಯ ರಹಿತ ಪರಿಶೀಲಿಸಬಹುದಾದ ಪರಮಾಣು ನಿಶ್ಯಸ್ತ್ರೀಕರಣವನ್ನು ಸಾಧಿಸುವ ಅಗತ್ಯವಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ಅವರು, ೨೦೨೬ರ ನಿಶ್ಯಸ್ತ್ರೀಕರಣ ಕುರಿತ ಸಮ್ಮೇಳನದಲ್ಲಿ ಭಾರತದ ಹೇಳಿಕೆಯನ್ನು ಮಂಡಿಸಿ, ಮಿಲಿಟರಿಯಲ್ಲಿ ಕೃತಕ ಬುದ್ಧಿಮತ್ತೆಯನ್ನು ಜವಾಬ್ದಾರಿಯುತವಾಗಿ ಬಳಕೆ ಮಾಡಿಕೊಳ್ಳಬೇಕು. ರಕ್ಷಣಾ ವಲಯದಲ್ಲಿ ವಿಶ್ವಾಸಾರ್ಹ ಎಐ ಮೌಲ್ಯಮಾಪನಕ್ಕೆ ರಾಷ್ಟ್ರೀಯ ಚೌಕಟ್ಟು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

<><><>

ಕರ್ನಾಟಕದ ತುಮಕೂರು ಜಿಲ್ಲೆ ತಿಪಟೂರು ತಾಲೂಕಿನ ಹೊನ್ನವಳ್ಳಿಯ ಎಲ್‌ಸಿ-೮೮ರ ಬದಲಾಗಿ ನಿರ್ಮಿಸುತ್ತಿರುವ ರಸ್ತೆ ಮೇಲ್ಸೇತುವೆ ಕಾಮಗಾರಿಯನ್ನು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ

ವಿ.ಸೋಮಣ್ಣ ಇಂದು ಪರಿಶೀಲಿಸಿದರು. ಈ ಯೋಜನೆ ಪ್ರಯಾಣಿಕರ ಸುರಕ್ಷತೆಯನ್ನು ಗಮನಾರ್ಹವಾಗಿ ಹೆಚ್ಚಿಸಲಿದ್ದು, ಸಂಚಾರವನ್ನು ಸುಗಮಗೊಳಿಸಲಿದೆ. ರಸ್ತೆ ಮೇಲ್ಸೇತುವೆ ಕಾಮಗಾರಿ ಪರಿಶೀಲನೆ ವೇಳೆ, ರೈಲ್ವೆ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

<><><><>

'ಭಾರತ್ ರಣಭೂಮಿ ದರ್ಶನ' ಯಾತ್ರೆಯ ಸಮಾರೋಪ ಕಾರ್ಯಕ್ರಮಕ್ಕೆ ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ದೆಹಲಿಯ ರಾಷ್ಟ್ರೀಯ ಯುದ್ಧ ಸ್ಮಾರಕದಲ್ಲಿ ಚಾಲನೆ ನೀಡಿದರು.

<><><><>

ಅಮೆರಿಕ ತನ್ನ ಹಿಂದಿನ ಸ್ಥಿತಿಗೆ ಮರಳಿರುವುದೇ ಅಲ್ಲದೇ, ಸದ್ಯ ಶ್ರೀಮಂತ ರಾಷ್ಟ್ರವಾಗಿದೆ ಮತ್ತು ಹಿಂದಿಗಿಂತಲು ಅತ್ಯಂತ ಬಲಿಷ್ಠವಾಗಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಎರಡನೇ ಬಾರಿಗೆ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಸ್ಟೇಟ್ ಆಫ್ ಯೂನಿಯನ್‌ನಲ್ಲಿ ಭಾಷಣ ಮಾಡಿದ ಅವರು, ತಮ್ಮ ನಾಯಕತ್ವಕ್ಕೆ ರಾಷ್ಟ್ರವ್ಯಾಪಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಭದ್ರತೆ ಮತ್ತು ಗಡಿನಿಯಂತ್ರಣಕ್ಕೆ ಸಂಬಂಧಿಸಿದಂತೆ ತಾವು ಕೈಗೊಂಡಿರುವ ಕ್ರಮಗಳನ್ನು ವಿವರಿಸಿದ ಅವರು, ಅಮೆರಿಕಾದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕಳೆದ ೯ ತಿಂಗಳಿಂದ ಯಾವುದೇ ಅಕ್ರಮ ವಲಸಿಗರನ್ನು ದೇಶದೊಳಕ್ಕೆ ಬಿಟ್ಟಿಲ್ಲ. ಗಡಿಯನ್ನು ಶೇಕಡ ನೂರರಷ್ಟು ಮುಚ್ಚಲಾಗಿದೆ ಎಂದು ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>